ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಶುಕ್ರವಾರ, ದಿನಾಂಕ 19ನೇ ಜುಲೈ, 2019

ಚರಂಡಿ ಸ್ವಚ್ಛಗೊಳಿಸಲು ಕೈಗೊಂಡ ಕ್ರಮಗಳ ಬಗ್ಗೆ

ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):-

396 (578) ಮಾನ್ಯ ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2017 ನೇ ಸಾಲಿನಲ್ಲಿ ಬೀದರ್ ನಗರದಲ್ಲಿ ಮಳೆಗಾಲದ ಪೂರ್ವ ಸಿದ್ದತೆಗಾಗಿ ಚರಂಡಿ ಸ್ವಚ್ಛಗೊಳಿಸಲು ಕೈಗೊಂಡ ಕಾಮಗಾರಿಗಳಲ್ಲಿ ಆದ ಅವ್ಯವಹಾರಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;(ಮಾಹಿತಿ ನೀಡುವುದು)

(ಆ) ಯಾವ ಯಾವ ಅಧಿಕಾರಿಗಳು ಈ ಅವ್ಯವಹಾರದಲ್ಲಿ ಭಾಗಿಯಾಗಿದ್ದಾರೆ ಅವರುಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ (ವಿವರ ನೀಡುವುದು)

(ಇ) ಈ ಅವ್ಯವಹಾರದಲ್ಲಿ ಸುಮಾರು ಮೊತ್ತದ ಹಣವನ್ನು ಕಾನೂನು ಬಾಹಿರವಾಗಿ ಆಗದೇ ಇರುವ ಕಾಮಗಾರಿಗೆ ಪಾವತಿಸಿದ್ದು ಇದಕ್ಕೆ ಕಾರಣರಾದ ಅಧಿಕಾರಿಗಳಿಂದ ಈ ಹಣವನ್ನು ವಸೂಲಿ ಮಾಡಲು ಯಾವ ಕ್ರಮ ಕೈಗೊಳ್ಳಲಾಗುವುದು ? (ಸ್ಪಷ್ಟ ಮಾಹಿತಿ ನೀಡುವುದು)